# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಜಬ್ಬರ್ ಖಾನ್ ಬಿನ್ ಅಬ್ದುಲ್ ಅಜೀಜ್ ಖಾನ್, #12/1, 12ನೇ ಕ್ರಾಸ್, ಚಿನ್ನಪ್ಪ ಗಾರ್ಡನ್, ಬೆನ್ಸನ್ ಟೌನ್ ಅಂಚೆ, ಬೆಂಗಳೂರು, ಇವರನ್ನು ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರ ಆಪ್ತ ಶಾಖೆಯಲ್ಲಿ ಖಾಲಿ ಇರುವ ಗ್ರೂಪ್ 'ಡಿ' ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 125 ಶಿಸನೇ 2002, ದಿನಾಂಕ: 27.11.2002.
2. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 237 ಅಹಿಸೇ 2012, ದಿನಾಂಕ: 27.07.2012.
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಪಿಡಿ 48 ಪಿಎಸ್‌ಡಿ 2014, ದಿನಾಂಕ: 13.06.2014.
4. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 78 ಶಿಸನೇ 2014, ದಿನಾಂಕ: 16.6.2014.
5. ಉಪಾಧ್ಯಕ್ಷರ ಟಿಪ್ಪಣಿ ಸಂಖ್ಯೆ: ಕೆಎಸ್‌ಪಿಬಿ/ಎಸ್‌ಬಿಎಫ್/03/15, ದಿನಾಂಕ:29.10.2015.
6. ಅಧಿಕೃತ ಜ್ಞಾಪನ ಸಂಖ್ಯೆ: ಪಿಡಿ 87 ಎಸ್‌ಪಿಬಿ 2015, ದಿನಾಂಕ: 06.11.2015.

**ಪ್ರಸ್ತಾವನೆ :**

ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರ ಆಪ್ತ ಶಾಖೆಗೆ 12 ವಿವಿಧ ಹುದ್ದೆಗಳನ್ನು ನಿಯೋಜನೆ / ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಮಂಜೂರಾತಿ ನೀಡಲಾಗಿದೆ.

ಮಾನ್ಯ ಮುಖ್ಯಮಂತ್ರಿಯವರ ಸಚಿವಾಲಯ/ಸಚಿವರ/ ವಿಧಾನ ಸಭೆ/ವಿಧಾನ ಪರಿಷತ್ತು / ರಾಜ್ಯ ಸಭೆ / ಲೋಕ ಸಭೆ ಸದಸ್ಯರ ಆಪ್ತ ಸಿಬ್ಬಂದಿ ಶಾಖೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಚಿತ ವೇತನವನ್ನು ಮೇಲೆ ಓದಲಾದ (2)ರ ಅಧಿಕೃತ ಜ್ಞಾಪನದಲ್ಲಿ ಪರಿಷ್ಕರಿಸಲಾಗಿರುತ್ತದೆ.

ಶ್ರೀ ಸಿ.ಎಂ. ಇಬ್ರಾಹಿಂ, ಮಾಜಿ ಸಚಿವರು, ಇವರನ್ನು ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರನ್ನಾಗಿ ಮೇಲೆ ಓದಲಾದ (3) ಮತ್ತು (4)ರ ಸರ್ಕಾರದ ಅಧಿಸೂಚನೆಗಳಲ್ಲಿ ನೇಮಿಸಲಾಗಿದೆ ಹಾಗೂ ಅವರಿಗೆ ಸಚಿವ ಸಂಪುಟ ದರ್ಜೆಯ ಸ್ಥಾನಮಾನವನ್ನು ನೀಡಲಾಗಿರುತ್ತದೆ.

ಶ್ರೀ ಜೆ.ವಿ. ದೀಪಕ್ ಬಿನ್ ವೆಂಕಟೇಶ್, ಗ್ರೂಪ್ ಡಿ, ಉಪಾಧ್ಯಕ್ಷರ ಆಪ್ತ ಶಾಖೆ, ರಾಜ್ಯ ಯೋಜನಾ ಮಂಡಳಿ, ಇವರ ಸೇವೆಯನ್ನು ದಿನಾಂಕ: 31.10.2015 ರಿಂದ ಪದಮುಕ್ತಗೊಳಿಸಿ ಶ್ರೀ ಜಬ್ಬರ್ ಖಾನ್ ಬಿನ್ ಅಬ್ದುಲ್ ಅಜೀಜ್ ಖಾನ್, #12/1, 12ನೇ ಕ್ರಾಸ್, ಚಿನ್ನಪ್ಪ ಗಾರ್ಡನ್, ಬೆನ್ಸನ್ ಟೌನ್ ಅಂಚೆ, ಬೆಂಗಳೂರು, ಇವರನ್ನು ಉಪಾಧ್ಯಕ್ಷರು, ರಾಜ್ಯ ಯೋಜನಾ ಮಂಡಳಿ, ಇವರ ಆಪ್ತ ಶಾಖೆಯಲ್ಲಿ ಖಾಲಿ ಇರುವ ಗ್ರೂಪ್ 'ಡಿ' ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ದಿನಾಂಕ: 01.11.2015ರಿಂದ ಜಾರಿಗೆ ಬರುವಂತೆ ನೇಮಕ ಮಾಡಿ ಆದೇಶ ಹೊರಡಿಸುವಂತೆ ಮೇಲೆ ಕ್ರಮ ಸಂಖ್ಯೆ (5) ರಲ್ಲಿ ಓದಲಾದ ಟಿಪ್ಪಣಿಯಲ್ಲಿ ಕೋರಿರುತ್ತಾರೆ.

ಶ್ರೀ ಜೆ.ವಿ. ದೀಪಕ್, ಗ್ರೂಪ್ ಡಿ ನೌಕರರು, ಉಪಾಧ್ಯಕ್ಷರ ಆಪ್ತ ಶಾಖೆ, ರಾಜ್ಯ ಯೋಜನಾ ಮಂಡಳಿ, ಇವರನ್ನು ದಿನಾಂಕ: 31.10.2015ರ ಅಪರಾಹ್ನದಿಂದ ಜಾರಿಗೆ ಬರುವಂತೆ ಮೇಲೆ ಕ್ರಮ ಸಂಖ್ಯೆ 6 ರಲ್ಲಿ ಓದಲಾದ ಅಧಿಕೃತ ಜ್ಞಾಪನದಲ್ಲಿ ರಾಜ್ಯ ಯೋಜನಾ ಮಂಡಳಿಯ ಆಪ್ತ ಶಾಖೆಯ ಕರ್ತವ್ಯದಿಂದ ಬಿಡುಗಡೆಗೊಳಿಸಲಾಗಿದೆ. ಶ್ರೀ ಜಬ್ಬರ್‌ಖಾನ್ ಬಿನ್ ಅಬ್ದುಲ್ ಅಜೀಜ್ ಖಾನ್, ಬೆಂಗಳೂರು, ರವರನ್ನು ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರ ಆಪ್ತ ಶಾಖೆಗೆ ಗ್ರೂಪ್ 'ಡಿ' ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ನೇಮಿಸುವ ಬಗ್ಗೆ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ: ಪಿಡಿ 86 ಎಸ್‌ಪಿಬಿ 2015, ಬೆಂಗಳೂರು, ದಿನಾಂಕ: 06.11.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಶ್ರೀ ಜಬ್ಬರ್ ಖಾನ್ ಬಿನ್ ಅಬ್ದುಲ್ ಅಜೀಜ್ ಖಾನ್, #12/1, 12ನೇ ಕ್ರಾಸ್, ಚಿನ್ನಪ್ಪ ಗಾರ್ಡನ್, ಬೆನ್ಸನ್ ಟೌನ್ ಅಂಚೆ, ಬೆಂಗಳೂರು, ಇವರನ್ನು ರಾಜ್ಯ

297

<u>ಸರ್ಕಾರಿ ಆದೇಶ ಸಂಖ್ಯೆ: ಪಿಡಿ 86 ಎಸ್‌ಪಿಬಿ 2015, ದಿನಾಂಕ: 06.11.2015ಕ್ಕೆ ಅನುಬಂಧ.</u>

<u>ಶ್ರೀ ಜಬ್ಬರ್ ಖಾನ್ ಬಿನ್ ಅಬ್ದುಲ್ ಅಜೀಜ್ ಖಾನ್, ಬೆಂಗಳೂರು, ಇವರ ಗುತ್ತಿಗೆ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳು</u>

1. ಶ್ರೀ ಜಬ್ಬರ್ ಖಾನ್ ಬಿನ್ ಅಬ್ದುಲ್ ಅಜೀಜ್ ಖಾನ್, #12/1, 12ನೇ ಕ್ರಾಸ್, ಚಿನ್ನಪ್ಪ ಗಾರ್ಡನ್, ಬೆನ್ಸನ್ ಟೌನ್ ಅಂಚೆ, ಬೆಂಗಳೂರು, ಇವರ ಗುತ್ತಿಗೆ ನೇಮಕಾತಿ ಅವಧಿಯು ದಿನಾಂಕ:02.11.2015 ರಿಂದ ಮಾನ್ಯ ಉಪಾಧ್ಯಕ್ಷರ ಕಾರ್ಯಾವಧಿಯವರೆಗೆ ಮಾತ್ರ ಇದ್ದು ಇದೊಂದು ತಾತ್ಕಾಲಿಕ ನೇಮಕಾತಿ ಆಗಿರುತ್ತದೆ.

2. ಇವರ ಗುತ್ತಿಗೆ ನೇಮಕಾತಿಗೆ ಮಾಸಿಕ ರೂ.9,600/-(ಒಂಬತ್ತು ಸಾವಿರದ ಆರುನೂರು ರೂಪಾಯಿಗಳು ಮಾತ್ರ) ಗಳ ಕ್ರೋಢೀಕೃತ ವೇತನವನ್ನು ನಿಗದಿ ಪಡಿಸಲಾಗಿದೆ. ಇದಲ್ಲದೆ, ಇನ್ನಿತರ ಯಾವುದೇ ಭತ್ಯೆಗಳಿಗೂ ಇವರು ಅರ್ಹರಾಗಿರುವುದಿಲ್ಲ.

3. ಸದರಿ ಗುತ್ತಿಗೆ ನೌಕರರು ಸಾರ್ವಜನಿಕ ಹಿತ ದೃಷ್ಠಿಯಿಂದ ಪ್ರಯಾಣ ಮಾಡಲೇ ಬೇಕಾದಲ್ಲಿ ಮಾತ್ರ ಇವರು ನೇಮಕಾತಿ ಹೊಂದಿರುವ ಹುದ್ದೆಯ ಕಾಲಿಕ ವೇತನ ಶ್ರೇಣಿಯ ಕನಿಷ್ಠ ವೇತನದ ಮೇಲೆ ನಿಯಮಾನುಸಾರ ಲಭ್ಯವಿರುವ ಪ್ರಯಾಣಭತ್ಯೆ ಮತ್ತು ದಿನಭತ್ಯೆಯನ್ನು ಪಡೆಯಲು ಅರ್ಹರಾಗಿರುತ್ತಾರೆ.

4. ಸದರಿ ಗುತ್ತಿಗೆ ನೌಕರರು ವಾರ್ಷಿಕ 15 ದಿನಗಳ ಸಾಂದರ್ಭಿಕ ರಜೆಯನ್ನು ಮಾತ್ರ ಪಡೆಯಲು ಅರ್ಹರಾಗಿರುತ್ತಾರೆ.

5. ಒಪ್ಪಂದದ ಷರತ್ತು ಮತ್ತು ನಿಬಂಧನೆಗಳಲ್ಲಿ ನೀಡಿರುವ ಸೌಲಭ್ಯಗಳ ಹೊರತಾಗಿ ಬೇರಾವುದೇ ಸೌಲಭ್ಯಕ್ಕೆ ಅಂದರೆ ವೇತನ ಬಡ್ತಿ, ಪದೋನ್ನತಿ, ಪಿಂಚಣಿ ಇತ್ಯಾದಿ ಸೌಲಭ್ಯಗಳಿಗೆ ಸದರಿ ಗುತ್ತಿಗೆ ನೌಕರರು ಅರ್ಹರಾಗಿರುವುದಿಲ್ಲ.

6. ಸದರಿ ನೌಕರರ ದುರ್ವತನೆ, ನಿರ್ಲಕ್ಷತೆಯ ನಿಮಿತ್ತ ಸರ್ಕಾರಕ್ಕೆ ನಷ್ಟವು ಉಂಟಾದಲ್ಲಿ ಈ ಎಲ್ಲಾ ನಷ್ಟಗಳನ್ನು ಸದರಿ ನೌಕರರು ಭರಿಸಿಕೊಡಲು ಬದ್ಧರಾಗಿರತಕ್ಕದ್ದು.

7. ಸದರಿ ಗುತ್ತಿಗೆ ನೇಮಕಾತಿಯನ್ನು ಯಾವುದೇ ಕಾರಣಕ್ಕೂ ಖಾಯಂ ಎಂದು ಪರಿಗಣಿಸಲಾಗುವುದಿಲ್ಲ. ಇವರ ಕರ್ತವ್ಯ, ಕಾರ್ಯ ಮತ್ತು ಪ್ರಕಾರ್ಯಗಳನ್ನು ಶ್ರದ್ಧೆ, ಭಕ್ತಿ ಮತ್ತು ಆಸಕ್ತಿಯಿಂದ ಇವರು ನೆರವೇರಿಸುವುದು.

8. ಇವರು ಕರ್ತವ್ಯವನ್ನು ಪಾಲಿಸುತ್ತಿರುವಾಗ ಅಥವಾ ನೆರವೇರಿಸುತ್ತಿರುವಾಗ ಇವರಿಗೆ ಲಭ್ಯವಾಗಬಹುದಾದ ಅಥವಾ ದೊರಕಬಹುದಾದ ಅಧಿಕೃತ ಮಾಹಿತಿಯನ್ನು ಗೌಪ್ಯವಾಗಿಟ್ಟು ಕಟ್ಟುನಿಟ್ಟಾಗಿ ಪಾಲಿಸಬೇಕು.

9. 1966ರ ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಮಾವಳಿ ಮತ್ತು 1957ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗೆ ಇವರು ಬದ್ಧರಾಗಿರುತ್ತಾರೆ.

10. ಈ ಒಪ್ಪಂದದ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಗುತ್ತಿಗೆ ನೇಮಕಾತಿಯು ತಾನಾಗಿಯೇ ಮುಕ್ತಾಯವಾಗುತ್ತದೆ.

ಯೋಜನಾ ಮಂಡಳಿಯ ಉಪಾಧ್ಯಕ್ಷರ ಆಪ್ತ ಶಾಖೆಯಲ್ಲಿ ಖಾಲಿ ಇರುವ ಗ್ರೂಪ್ 'ಡಿ' ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ದಿನಾಂಕ: 02.11.2015ರಿಂದ ಜಾರಿಗೆ ಬರುವಂತೆ ನೇಮಕ ಮಾಡಲಾಗಿದೆ. ಒಪ್ಪಂದದ ನೇಮಕಾತಿಯ ನಿಬಂಧನೆ ಹಾಗೂ ಷರತ್ತುಗಳನ್ನು ಅನುಬಂಧದಲ್ಲಿರುವಂತೆ ನಿಗದಿಪಡಿಸಲಾಗಿದೆ.

ಈ ಉದ್ದೇಶಕ್ಕಾಗಿ ತಗಲುವ ವೆಚ್ಚವನ್ನು ರಾಜ್ಯ ಯೋಜನಾ ಮಂಡಳಿಯ ಲೆಕ್ಕ ಶೀರ್ಷಿಕೆ "3451-00-101-4-00 (ಯೋಜನೇತರ)" ದಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 125 ಸೇಸನೀ 2002, ದಿನಾಂಕ: 27.11.2002 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಲಿತ)
ಸರ್ಕಾರದ ಅಧೀನ ಕಾರ್ಯದರ್ಶಿ-3
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಾಧ್ಯಕ್ಷರ ಆಪ್ತ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ.
3. ಸರ್ಕಾರದ ಕಾರ್ಯದರ್ಶಿ (1), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
4. ಸರ್ಕಾರದ ಕಾರ್ಯದರ್ಶಿ (2), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
5. ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರ.
6. ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-6).
9. ಸರ್ಕಾರದ ಅಧೀನ ಕಾರ್ಯದರ್ಶಿ (1 ಮತ್ತು 2), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ – ಕಂಪೆಂಡಿಯಂಗಾಗಿ.
10. ಸಹಾಯಕ ಖಜಾನಾಧಿಕಾರಿ, ಯೋಜನಾ ಇಲಾಖೆ, ಎಸ್-3.
11. ಶ್ರೀ ಅಕ್ಬರ್ ಖಾನ್ ಬಿನ್ ಅಬ್ದುಲ್ ಅಜೀಜ್ ಖಾನ್, #12/1, 12ನೇ ಕ್ರಾಸ್, ಚಿನ್ನಪ್ಪ ಗಾರ್ಡನ್, ಬೆನ್ಸನ್ ಟೌನ್ ಅಂಚೆ, ಬೆಂಗಳೂರು, ಇವರು ವಿದ್ಯಾರ್ಹತೆಯ ಮೂಲ ಪ್ರತಿಗಳನ್ನು ಕೂಡಲೇ ಬಂದು ಶಾಖೆಯಲ್ಲಿ ತೋರಿಸುವಂತೆ ಸೂಚಿಸಿದೆ.
12. ಶಾಖಾ ರಕ್ಷಾ ಕಡತ ಹಾಗೂ ಹೆಚ್ಚುವರಿ ಪ್ರತಿಗಳು.

295



11. ಇವರ ದುರ್ನಡತೆಯಿಂದಾಗಲೀ ಅಥವಾ ನಿರ್ಲಕ್ಷ್ಯತೆ, ಉದಾಸೀನತೆಯಿಂದಾಗಲೀ ಸರ್ಕಾರಕ್ಕೆ ಸಂಬಂಧಿಸಿದಂತೆ ಆರ್ಥಿಕ ನಷ್ಟ ಉಂಟಾದಲ್ಲಿ ಇದನ್ನು ಸರ್ಕಾರಕ್ಕೆ ತುಂಬಿಕೊಡಲು ಬದ್ಧರಾಗಿರತಕ್ಕದ್ದು.

12. ಈ ಆದೇಶವನ್ನು ಸ್ವೀಕರಿಸಿದ ದಿನಾಂಕದಿಂದ ಏಳು ದಿನಗಳೊಳಗಾಗಿ ರೂ.50/- (ಐವತ್ತು ರೂಪಾಯಿಗಳು)ಗಳ ಮೌಲ್ಯದ ಛಾಪಾ ಕಾಗದದಲ್ಲಿ ಸದರಿ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳನ್ನು ಒಳಗೊಂಡಿರುವ ಕರಾರು ಪತ್ರವನ್ನು ಕ್ರಮಬದ್ಧ ರೀತಿಯಲ್ಲಿ ಸದರಿ ನೌಕರರು ತಮ್ಮ ಒಪ್ಪಿಗೆಯನ್ನು ನಮೂದಿಸಿ ಸಲ್ಲಿಸತಕ್ಕದ್ದು ಹಾಗೂ ವಿದ್ಯಾರ್ಹತೆಯ ಮೂಲ ಪ್ರತಿಗಳನ್ನು ಸಲ್ಲಿಸತಕ್ಕದ್ದು.

(ಲಲಿತ)
ಸರ್ಕಾರದ ಅಧೀನ ಕಾರ್ಯದರ್ಶಿ-3
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.